ಜಾನುವಾರುಗಳಿಗೆ ಔಷಧಿಯ ಕೊರತೆ

536 (489) ಶ್ರೀ ಶಿವಶಂಕರರೆಡ್ಡಿ ಎನ್.ಹೆಚ್ (ಗೌರಿಬಿದನೂರು) : ಮಾನ್ಯ ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗೌರಿಬಿದನೂರು ತಾಲ್ಲೂಕಿನಲ್ಲಿ ಪಶು ಆಸ್ಪತ್ರೆ ಹಾಗೂ ಪಶುಚಿಕಿತ್ಸಾಲಯಗಳಲ್ಲಿ ಔಷಧಿಯ ಕೊರತೆ ಇರುವುದರಿಂದ ಜಾನುವಾರುಗಳ ಚಿಕಿತ್ಸೆಗೆ ತುಂಬಾ ತೊಂದರೆಯಾಗುತ್ತಿರುವುದು ನಿಜವಲ್ಲವೇ;

ಆ) ಹಾಗಿದ್ದಲ್ಲಿ, ಜಾನುವಾರುಗಳ ಚಿಕಿತ್ಸೆಗೆ ಉತ್ತಮ ಮಟ್ಟದ ಔಷಧಿಯನ್ನು ಸರಬರಾಜು ಮಾಡಿ, ಅವುಗಳ ಚಿಕಿತ್ಸೆಗೆ ಯಾವುದೇ ರೀತಿಯ ತೊಂದರೆಯಾಗದಂತೆ ಅನುಕೂಲ ಮಾಡಿಕೊಡಲು ಸರ್ಕಾರವು ಕೈಗೊಳ್ಳುವ ಕ್ರಮವೇನು?

ಶ್ರೀ ರೇವೂ ನಾಯಕ್ ಬೆಳಮಗಿ (ಪಶುಸಂಗೋಪನೆ ಸಚಿವರು) :

ಅ) – ಇಲ್ಲ –

ಆ) ಆದಾಗ್ಯೂ, ರಾಜ್ಯವಲಯದಲ್ಲಿ ಲಭ್ಯವಿರುವ ಅನುದಾನದಲ್ಲಿ ಅವಶ್ಯ ಔಷಧಿಗಳನ್ನು ಖರೀದಿಸಿ, ಜಿಲ್ಲೆಗಳಿಗೆ ಸರಬರಾಜು ಮಾಡಲಾಗುತ್ತಿದೆ. ಅಲ್ಲದೆ, ಜಿಲ್ಲಾ ಪಂಚಾಯತ್ ಅಡಿ ಇರುವ ಅನುದಾನದಲ್ಲಿ ಜಿಲ್ಲಾ ಉಪನಿರ್ದೇಶಕರ ಕಛೇರಿಯಿಂದ ಅವಶ್ಯವಿರುವ ಔಷಧಿಗಳನ್ನು ಖರೀದಿಸಿ, ವಿವಿಧ ಸಂಸ್ಥೆಗಳಿಗೆ ಸರಬರಾಜು ಮಾಡಲಾಗುತ್ತಿದೆ.

ಶಾಸಕರ ಪ್ರದೇಶಾಭಿವೃದ್ಧಿಯ ಬಾಕಿ ಅನುದಾನ ಬಿಡುಗಡೆ

537 (490) ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್. (ಗೌರಿಬಿದನೂರು) : ಮಾನ್ಯ ಶಿಕ್ಷಣ, ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಮುಜರಾಯಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಾಸಕರ ಪ್ರದೇಶಾಭಿವೃದ್ಧಿಯಡಿಯಲ್ಲಿ ಕ್ಷೇತ್ರದ ಅಭಿವೃದ್ಧಿ ಕಾರ್ಯಗಳಿಗೆ ವರ್ಷಕ್ಕೆ ರೂ.1.00 ಕೋಟಿ ಅನುದಾನ ಬಿಡುಗಡೆ ಮಾಡುತ್ತಿರುವುದು ನಿಜವೇ?

ಆ) 2010–11ನೇ ಸಾಲಿನಲ್ಲಿ ಶಾಸಕರ ಪ್ರದೇಶಾಭಿವೃದ್ಧಿಯಡಿಯಲ್ಲಿ ಕೇವಲ ರೂ. 22.00 ಲಕ್ಷ ಅನುದಾನವನ್ನು ಪ್ರತಿ ತಾಲ್ಲೂಕುಗಳಿಗೆ ಬಿಡುಗಡೆ